# ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:** ಕಲಬುರಗಿ ಜಿಲ್ಲೆಯ ಬೆಣ್ಣೆತೋರಾ ಯೋಜನೆ ಅಡಿಯಲ್ಲಿ ಬರುವ ನಾಗೂರ ಪುನರ್ವಸತಿ ಕೇಂದ್ರ-2ರಲ್ಲಿ ಸರ್ಕಾರಿ ಪ್ರೌಢಶಾಲೆ ನಿರ್ಮಾಣಕ್ಕಾಗಿ ನಿವೇಶನ ಒದಗಿಸುವ ಕುರಿತು.

**ಓದಲಾಗಿದೆ:** 1. ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ನೀರಾವರಿ ನಿಗಮ ನಿಯಮಿತ, ಬೆಂಗಳೂರು ಇವರ ಪತ್ರ ಸಂಖ್ಯೆ:ಕನೀನಿನಿ/ಕೇಕ/ಸಿ.11/275/ಎಜಿಎನ್/2014-15/6745 ದಿನಾಂಕ:02.01.2017.

2. ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ನೀರಾವರಿ ನಿಗಮ ನಿಯಮಿತ ರವರ ಪತ್ರಸಂಖ್ಯೆ:ಕನೀನಿನಿ/ಕೇಕ/ಎಎಸ್‌ಟಿ/ಸಿ-11/275/2014-15/4833 ದಿನಾಂಕ:30.11.2018.

---***---

**ಪ್ರಸ್ತಾವನೆ:**

ಮೇಲೆ ಓದಲಾದ (1)ರ ಪತ್ರದಲ್ಲಿ ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ನೀರಾವರಿ ನಿಗಮ ನಿಯಮಿತ ಇವರು, ಕಲಬುರ್ಗಿ ಜಿಲ್ಲೆ/ತಾಲ್ಲೂಕಿನ ನಾಗೂರು ಗ್ರಾಮದ ಮುಖಂಡರು ಜಲ ಸಂಪನ್ಮೂಲ ಇಲಾಖೆಗೆ ಸೇರಿದ ನಾಗೂರು ಗ್ರಾಮದ ಸರ್ವೆ ನಂ.295/2ಅ ರಲ್ಲಿ ನಾಗರೀಕ ಸೌಲಭ್ಯದ 2231.72 ಚ.ಮೀ. ಭೂಮಿಯನ್ನು ಸರ್ಕಾರಿ ಪ್ರೌಢಶಾಲೆ ನಿರ್ಮಾಣಕ್ಕೆ ನೀಡುವಂತೆ ಕೋರಿರುತ್ತಾರೆ ಎಂದು ತಿಳಿಸಿರುತ್ತಾರೆ. ಅವರು ತಮ್ಮ ಪತ್ರದಲ್ಲಿ, ಕಲಬುರಗಿ ಜಿಲ್ಲೆ/ತಾಲ್ಲೂಕಿನ ನಾಗೂರು ಗ್ರಾಮದ ಸರ್ವೆ ನಂ.295/2ಅ ರಲ್ಲಿ ನಾಗರೀಕ ಸೌಲಭ್ಯದ 2231.72 ಚ.ಮೀ. ಭೂಮಿಯನ್ನು ಬೆಣ್ಣೆತೋರಾ ಯೋಜನೆ ಅಡಿಯಲ್ಲಿ ಬರುವ ನಾಗೂರ ಪುನರ್ವಸತಿ ಕೇಂದ್ರಕ್ಕೆ ಜಲಸಂಪನ್ಮೂಲ ಇಲಾಖೆಯ ಪುನರ್ವಸತಿ ಕಟ್ಟಡಗಳ ನಿರ್ಮಾಣಕ್ಕಾಗಿ ಹಾಗೂ ಶಿಬಿರದ ಇತರೆ ಮೂಲ ಸೌಲಭ್ಯಗಳಿಗಾಗಿ ಸ್ವಾಧೀನಪಡಿಸಿಕೊಳ್ಳಲಾಗಿತ್ತು; ಆದ್ದರಿಂದ ನಾಗೂರ ಪುನರ್ವಸತಿ ಕೇಂದ್ರದಲ್ಲಿ ಸಾರ್ವಜನಿಕ ಉದ್ದೇಶಕ್ಕಾಗಿ ಕಾಯ್ದಿರಿಸಿದ ಜಮೀನು ಅಥವಾ ನಾಗರೀಕ ಸೌಲಭ್ಯ ಉದ್ದೇಶಕ್ಕಾಗಿ ಗುರುತಿಸಿರುವ ಜಮೀನನ್ನು ಸರ್ಕಾರಿ ಪ್ರೌಢಶಾಲೆ ನಿರ್ಮಾಣಕ್ಕೆ ನೀಡುವುದರಿಂದ ಪುನರ್ವಸತಿ ಕೇಂದ್ರದ ಮೂಲಭೂತ ಸೌಕರ್ಯಗಳಲ್ಲೊಂದಾದ ಸಾರ್ವಜನಿಕ ಶಿಕ್ಷಣಕ್ಕಾಗಿ ಬಳಸಿಕೊಳ್ಳುವಂತಾಗುವುದರಿಂದ ನಾಗೂರು ಗ್ರಾಮಕ್ಕೆ ಮಂಜೂರಾಗಿರುವ ಸರ್ಕಾರಿ ಪ್ರೌಢಶಾಲೆ ಕಟ್ಟಡ ನಿರ್ಮಿಸಲು ಅನುಮತಿ ನೀಡಬಹುದಾಗಿದೆ ಎಂದು ಸರ್ಕಾರಕ್ಕೆ ವರದಿ ಮಾಡಿರುತ್ತಾರೆ. ಈ ಕುರಿತಂತೆ ಸದರಿ ಪ್ರಸ್ತಾವನೆಯನ್ನು ದಿನಾಂಕ:19-08-2016ರಂದು ಜರುಗಿದ ಕರ್ನಾಟಕ ನೀರಾವರಿ ನಿಗಮದ ಮಂಡಳಿಯ 74ನೇ ಸಭೆಯಲ್ಲಿ ಮಂಡಿಸಿದ್ದು, ನಾಗೂರ ಪುನರ್ವಸತಿ ಕೇಂದ್ರದಲ್ಲಿ ಸಾರ್ವಜನಿಕ ಉದ್ದೇಶಕ್ಕಾಗಿ ಗುರುತಿಸಿರುವ ಜಮೀನನ್ನು ಸರ್ಕಾರಿ ಪ್ರೌಢಶಾಲೆ ನಿರ್ಮಾಣಕ್ಕೆ ನೀಡುವುದರಿಂದ ಪುನರ್ವಸತಿ ಕೇಂದ್ರದ ಮೂಲಭೂತ ಸೌಕರ್ಯಗಳಲ್ಲೊಂದಾದ ಸಾರ್ವಜನಿಕ ಶಿಕ್ಷಣಕ್ಕಾಗಿ ಬಳಸಿಕೊಳ್ಳುವಂತಾಗುತ್ತಿದ್ದು, ನಾಗೂರ ಗ್ರಾಮಕ್ಕೆ ಮಂಜೂರಾಗಿರುವ ಸರ್ಕಾರಿ ಪ್ರೌಢಶಾಲೆ ಕಟ್ಟಡ ನಿರ್ಮಿಸಲು ನಿವೇಶನ ಒದಗಿಸಲು ಅನುಮತಿ ಕೋರಿ ಸರ್ಕಾರಕ್ಕೆ ಪ್ರಸ್ತಾವನೆ ಮಂಡಿಸಲು ಮಂಡಳಿಯು ಶಿಫಾರಸ್ಸು ಮಾಡಿರುವುದಾಗಿ ವರದಿ ಮಾಡಿರುತ್ತಾರೆ.

...2

ಇದಕ್ಕೆ ಸಂಬಂಧಿಸಿದಂತೆ ಮೇಲೆ ಓದಲಾದ (2)ರ ಪತ್ರದಲ್ಲಿ ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ನೀರಾವರಿ ನಿಗಮ ನಿಯಮಿತ ರವರು, ನಾಗೂರ ಪುನರ್ವಸತಿ ಕೇಂದ್ರದಲ್ಲಿ ಸಾರ್ವಜನಿಕ ಉದ್ದೇಶಕ್ಕಾಗಿ ಕಾಯ್ದಿರಿಸಿದ ಜಮೀನು ಅಥವಾ ನಾಗರೀಕ ಸೌಲಭ್ಯ ಉದ್ದೇಶಕ್ಕಾಗಿ ಗುರುತಿಸಿರುವ ಜಮೀನನ್ನು ಸರ್ಕಾರಿ ಪ್ರೌಢಶಾಲೆ ನಿರ್ಮಾಣಕ್ಕೆ ಉಚಿತವಾಗಿ ಒದಗಿಸಿದಲ್ಲಿ, ಪುನರ್ವಸತಿ ಕೇಂದ್ರದ ಮೂಲಭೂತ ಸೌಕರ್ಯಗಳಲ್ಲೊಂದಾದ ಸಾರ್ವಜನಿಕ ಶಿಕ್ಷಣಕ್ಕಾಗಿ ಬಳಸಿಕೊಳ್ಳುವಂತಾಗುವುದು ಎಂದು ಅಭಿಪ್ರಾಯ ಪಡುತ್ತಾ, ಶಿಕ್ಷಣ ಇಲಾಖೆಯ ಆರ್.ಎಂ.ಎಸ್.ಎ. (ರಾಷ್ಟ್ರೀಯ ಮಾಧ್ಯಮಿಕ ಶಿಕ್ಷಣ ಅಭಿಯಾನ) ಯೋಜನೆ ಅಡಿಯಲ್ಲಿ ಮಂಜೂರಾದ ಅನುದಾನದಲ್ಲಿ ನಾಗೂರ ಗ್ರಾಮಕ್ಕೆ ಮಂಜೂರಾಗಿರುವ ಸರ್ಕಾರಿ ಪ್ರೌಢಶಾಲೆ ಕಟ್ಟಡ ನಿರ್ಮಿಸಲು ಸದರಿ ಜಮೀನನ್ನು ಹಸ್ತಾಂತರಿಸಲು ಪ್ರಸ್ತಾವನೆಯನ್ನು ಸರ್ಕಾರಕ್ಕೆ ಸಲ್ಲಿಸಿರುತ್ತಾರೆ.

ಸದರಿ ಪ್ರಸ್ತಾವನೆಯನ್ನು ಪರಿಶೀಲಿಸಲಾಗಿದ್ದು, ಈ ಕೆಳಗಿನಂತೆ ಆದೇಶವನ್ನು ಹೊರಡಿಸಲಾಗಿದೆ.

**<u>ಸರ್ಕಾರದ ಆದೇಶ ಸಂಖ್ಯೆ: ಜಸಂಇ 06 ಎಂಎಂಜಿ 2017, ಬೆಂಗಳೂರು, ದಿನಾಂಕ:30.05.2019</u>**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ, ಬೆಣ್ಣೆತೋರಾ ಯೋಜನೆ ಅಡಿಯಲ್ಲಿ ಬರುವ ನಾಗೂರ ಪುನರ್ವಸತಿ ಕೇಂದ್ರ-2ರಲ್ಲಿ ಜಲ ಸಂಪನ್ಮೂಲ ಇಲಾಖೆಗೆ ಸೇರಿದ ಕಲಬುರಗಿ ತಾಲ್ಲೂಕಿನ ನಾಗೂರ ಗ್ರಾಮದ ಸರ್ವೆ ನಂ.295/2ಅ ರಲ್ಲಿ ನಾಗರೀಕ ಸೌಲಭ್ಯ ಉದ್ದೇಶಕ್ಕಾಗಿ ಗುರುತಿಸಿರುವ 2231.72 ಚ.ಮೀ., ನಿವೇಶನವನ್ನು ಸರ್ಕಾರಿ ಪ್ರೌಢಶಾಲೆ ನಿರ್ಮಾಣಕ್ಕಾಗಿ ಶಿಕ್ಷಣ ಇಲಾಖೆಗೆ ಉಚಿತವಾಗಿ ಹಸ್ತಾಂತರಿಸಲು ಸರ್ಕಾರದ ಅನುಮೋದನೆ ನೀಡಲಾಗಿದೆ.

ಈ ಆದೇಶವನ್ನು ಕಂದಾಯ ಇಲಾಖೆಯ ಟಿಪ್ಪಣಿ ಸಂಖ್ಯೆ: ಆರ್‌ಡಿ 12 ಎಲ್‌ಜಿಜಿ 2017 ದಿನಾಂಕ:13.03.2017, ಆರ್ಥಿಕ ಇಲಾಖೆಯ ಟಿಪ್ಪಣಿ ಸಂಖ್ಯೆ: ಆಇ 243 ಆಕೋ-1/2017 ದಿನಾಂಕ: 24-05-2017ರಲ್ಲಿ ಹಾಗೂ ಶಿಕ್ಷಣ ಇಲಾಖೆ ದಿನಾಂಕ:16.05.2018ರಲ್ಲಿ ನೀಡಿರುವ ಸಹಮತಿಯ ಮೇರೆಗೆ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ,

[ಶ್ರೀಹರಿ ಎಸ್.ಆರ್]
ಸರ್ಕಾರದ ಅಧೀನ ಕಾರ್ಯದರ್ಶಿ (ತಾಂತ್ರಿಕ-1),
ಜಲ ಸಂಪನ್ಮೂಲ ಇಲಾಖೆ.

ಇವರಿಗೆ:

1. ಪ್ರಧಾನ ಮಹಾಲೇಖಪಾಲರು(G&SSA),ಕರ್ನಾಟಕ, ಹೊಸ ಕಟ್ಟಡ,"ಆಡಿಟ್ ಭವನ",ಅಂಚೆಪೆಟ್ಟಿಗೆ ಸಂಖ್ಯೆ:5398,ಬೆಂಗಳೂರು-01.

...3

2. ಪ್ರಧಾನ ಮಹಾಲೇಖಪಾಲರು, (ಆರ್ಥಿಕ ಮತ್ತು ರಾಜಸ್ವ ವಲಯ ಲೆಕ್ಕಪರಿಶೋಧನೆ), ಕರ್ನಾಟಕ, ಹೊಸ ಕಟ್ಟಡ, "ಆಡಿಟ್ ಭವನ", ಅಂಚೆ ಪೆಟ್ಟಿಗೆ ಸಂಖ್ಯೆ: 5398, ಬೆಂಗಳೂರು-560001.
3. ಪ್ರಧಾನ ಮಹಾಲೇಖಪಾಲರು, (ಲೆಕ್ಕಗಳು ಮತ್ತು ಹಕ್ಕುಸ್ವಾಮ್ಯ), ಕರ್ನಾಟಕ, ಹೊಸ ಕಟ್ಟಡ, "ಆಡಿಟ್ ಭವನ", ಅಂಚೆ ಪೆಟ್ಟಿಗೆ ಸಂಖ್ಯೆ: 5398, ಬೆಂಗಳೂರು-560001.
4. ಸರ್ಕಾರದ ಮುಖ್ಯ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿ (ಸಚಿವ ಸಂಪುಟ ಶಾಖೆ), ವಿಧಾನ ಸೌಧ, ಬೆಂಗಳೂರು (ಸಚಿವ ಸಂಪುಟ ಪ್ರಕರಣ ಸಂಖ್ಯೆ: ಸಿ-128/2019, ದಿನಾಂಕ:25.02.2019ರ ಮೇರೆಗೆ).
5. ಸರ್ಕಾರದ ಪ್ರಧಾನ ಕಾರ್ಯದರ್ಶಿ, (ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ) ಶಿಕ್ಷಣ ಇಲಾಖೆ, ಬಹುಮಹಡಿ ಕಟ್ಟಡ, ಬೆಂಗಳೂರು.
6. ಮಾನ್ಯ ಜಲ ಸಂಪನ್ಮೂಲ ಸಚಿವರ ಆಪ್ತ ಕಾರ್ಯದರ್ಶಿ, ವಿಧಾನ ಸೌಧ, ಬೆಂಗಳೂರು.
7. ಸರ್ಕಾರದ ಪ್ರಧಾನ ಕಾರ್ಯದರ್ಶಿ, ಯೋಜನೆ ಕಾರ್ಯಕ್ರಮ ಸಂಯೋಜನೆ ಮತ್ತು ಸಾಂಖ್ಯಿಕ ಇಲಾಖೆ, ಬಹುಮಹಡಿಗಳ ಕಟ್ಟಡ, ಬೆಂಗಳೂರು.
8. ಸರ್ಕಾರದ ಪ್ರಧಾನ ಕಾರ್ಯದರ್ಶಿ, ಕಂದಾಯ ಇಲಾಖೆ, ಬಹುಮಹಡಿಗಳ ಕಟ್ಟಡ, ಬೆಂಗಳೂರು.
9. ಸರ್ಕಾರದ ಕಾರ್ಯದರ್ಶಿ (ವೆಚ್ಚ) ಆರ್ಥಿಕ ಇಲಾಖೆ, ವಿಧಾನ ಸೌಧ, ಬೆಂಗಳೂರು.
10. ಮಾನ್ಯ ಅಧ್ಯಕ್ಷರು,ಕನ್ನಡ ಅಭಿವೃದ್ಧಿ ಪ್ರಾಧಿಕಾರ, ವಿಧಾನಸೌಧ, ಬೆಂಗಳೂರು.
11. ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ನೀರಾವರಿ ನಿಗಮ ನಿಯಮಿತ, ಬೆಂಗಳೂರು.
12. ಮುಖ್ಯ ಇಂಜಿನಿಯರ್, ಕರ್ನಾಟಕ ನೀರಾವರಿ ನಿಗಮ ನಿಯಮಿತ, ನೀರಾವರಿ ಯೋಜನೆಗಳ ವಲಯ, ಕಲಬುರ್ಗಿ.
13. ನಿರ್ದೇಶಕರು, ಜಿಯೋಮ್ಯಾಟಿಕ್ಸ್ ಕೇಂದ್ರ, ಜಲಸಂಪನ್ಮೂಲ ಅಭಿವೃದ್ಧಿ ಸಂಸ್ಥೆ, ಬೆಂಗಳೂರು.
14. ನಿರ್ದೇಶಕರು, ರಾಜ್ಯ ಹುಜೂರು ಖಜಾನೆ, ಬೆಂಗಳೂರು.
15. ಸರ್ಕಾರದ ಪ್ರಧಾನ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿ, ಜಲಸಂಪನ್ಮೂಲ ಇಲಾಖೆ, ಬೆಂಗಳೂರು.
16. ಸರ್ಕಾರದ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿ, ಜಲ ಸಂಪನ್ಮೂಲ ಇಲಾಖೆ, ಬೆಂಗಳೂರು.
17. ಸರ್ಕಾರದ ಹೆಚ್ಚುವರಿ ಕಾರ್ಯದರ್ಶಿಯವರ ಆಪ್ತ ಸಹಾಯಕರು, ಜಲ ಸಂಪನ್ಮೂಲ ಇಲಾಖೆ, ಬೆಂಗಳೂರು.
18. ಶಾಖಾ ರಕ್ಷಾ ಕಡತ/ಹೆಚ್ಚಿನ ಪ್ರತಿ.

*******